**ಕರ್ನಾಟಕ ಸರ್ಕಾರ**

ಸಂಖ್ಯೆ: ಮಮಇ 273 ಪಿಹೆಚ್‌ಪಿ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:06.09.2025.

## ಸುತ್ತೋಲೆ

ವಿಷಯ: ಕರ್ನಾಟಕ ಸರ್ಕಾರದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ವಿಕಲಚೇತನರ ಕುಂದು ಕೊರತೆಗಳ ನಿವಾರಣಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ-2016ರ ಕಲಂ-23(1) ರಲ್ಲಿ "ಸರ್ಕಾರದ ಪ್ರತಿಯೊಂದು ಸಂಸ್ಥೆಯು, 19ನೇ ಪ್ರಕರಣದ ಉದ್ದೇಶಕ್ಕಾಗಿ ಒಬ್ಬರು ಕುಂದುಕೊರತೆಗಳ ನಿವಾರಣಾಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅಂಥ ಅಧಿಕಾರಿಯ ನೇಮಕದ ಬಗ್ಗೆ ಸಂದರ್ಭಾನುಸಾರ ಚೀಫ್ ಕಮಿಷನರ್‌ರಿಗೆ ಅಥವಾ ಸ್ಟೇಟ್ ಕಮಿಷನರ್‌ರಿಗೆ ತಿಳಿಸತಕ್ಕದ್ದು." ಎಂದು ನಮೂದಿಸಲಾಗಿರುತ್ತದೆ.

ಅದರಂತೆ ಸುತ್ತೋಲೆ ಸಂಖ್ಯೆ: ಮಮಇ 131 ಪಿಹೆಚ್‌ಪಿ 2019, ದಿನಾಂಕ: 10.10.2019, ಮತ್ತು ದಿನಾಂಕ:09.01.2023ರ ಸುತ್ತೋಲೆಗಳಲ್ಲಿ ಎಲ್ಲಾ ಇಲಾಖೆಗಳು, ಸಂಸ್ಥೆ, ನಿಗಮ, ಮಂಡಳಿ ಹಾಗೂ ಆಯೋಗಗಳು ಅಂಗವಿಕಲರ ಕುಂದುಕೊರತೆ ನಿವಾರಿಸಲು ಅಧಿಕಾರಿಯೊಬ್ಬರನ್ನು ನೇಮಿಸುವಂತೆಯೂ ಹಾಗೂ ಈ ರೀತಿ ನೇಮಕ ಮಾಡಿದ ಅಧಿಕಾರಿಗಳ ಹೆಸರು, ಪದನಾಮ, ವಿಳಾಸ ಹಾಗೂ ದೂರವಾಣಿ ಸಂಖ್ಯೆ ಇತ್ಯಾದಿ ವಿವರವನ್ನು ರಾಜ್ಯ ಆಯುಕ್ತರು, ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ ಇವರಿಗೆ ತಿಳಿಸಲು ಕ್ರಮವಹಿಸುವಂತೆ ಕೋರಲಾಗಿರುತ್ತದೆ.

ದಿನಾಂಕ:08.07.2025ರಂದು ಜರುಗಿದ ರಾಜ್ಯ ಮಟ್ಟದ ಅನುಷ್ಠಾನ ಸಮಿತಿ ಸಭೆಯ ನಡವಳಿಗಳಲ್ಲಿ ಸರ್ಕಾರದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ವಿಕಲಚೇತನರ ಕುಂದು ಕೊರತೆಗಳ ನಿವಾರಣಾಧಿಕಾರಿಯನ್ನು ನೇಮಕ ಮಾಡಿರುವ ಕುರಿತು ಮಾಹಿತಿಯನ್ನು ಪಡೆಯಲು ತೀರ್ಮಾನಿಸಲಾಗಿರುತ್ತದೆ. ಆದ್ದರಿಂದ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ-2016ರ ಕಲಂ-23ರನ್ವಯ "ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಅಧೀನ ಕಚೇರಿಗಳಲ್ಲಿ 19ನೇ ಪ್ರಕರಣದ ಉದ್ದೇಶಕ್ಕಾಗಿ ಒಬ್ಬರು ಕುಂದುಕೊರತೆಗಳ ನಿವಾರಣಾಧಿಕಾರಿಯನ್ನು ನೇಮಿಸುವಂತೆಯೂ ಹಾಗೂ ಈ ರೀತಿ ನೇಮಕ ಮಾಡಿದ ಅಧಿಕಾರಿಗಳ ಹೆಸರು, ಪದನಾಮ, ವಿಳಾಸ ಹಾಗೂ ದೂರವಾಣಿ ಸಂಖ್ಯೆ ಇತ್ಯಾದಿ ವಿವರಗಳನ್ನು ರಾಜ್ಯ ಆಯುಕ್ತರು, ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ ಇವರಿಗೆ ಕೂಡಲೇ ಕಳುಹಿಸಲು ಕ್ರಮವಹಿಸುವಂತೆ ಈ ಮೂಲಕ ಕೋರಿದೆ.

(ಡಾ. ಶಮ್ಲಾ ಇಕ್ಬಾಲ್)
ಸರ್ಕಾರದ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

**ಪ್ರತಿಯನ್ನು:**

1. ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳಿಗೆ ಮುಂದಿನ ಕ್ರಮಕ್ಕಾಗಿ.
2. ನಿರ್ದೇಶಕರು, ವಿಕಲಚೇತನರು ಮತ್ತು ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯ, ವಿ.ವಿ.ಗೋಪುರ, ಬೆಂಗಳೂರು.
3. ಆಯುಕ್ತರು, ರಾಜ್ಯ ಅಂಗವಿಕಲ ವ್ಯಕ್ತಿಗಳ ಹಕ್ಕು ಅಧಿನಿಯಮ, ಆಯುಕ್ತರ ಕಛೇರಿ, ನಂ 55, 2ನೇ ಮಹಡಿ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಕಟ್ಟಡ, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-560020.
4. ಕಛೇರಿ ಪ್ರತಿ. (ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್ ಸೈಟ್‌ನಲ್ಲಿ ಅಪ್ ಲೋಡ್ ಮಾಡುವುದು)
5. ಹೆಚ್ಚುವರಿ ಶಾಖಾ ಪ್ರತಿ